



**ಕ್ರೈಸ್ತರು** **ಸಿಖ್ಖರು** **ಬೌದ್ಧರು**

# 2018-19ನೇ ಸಾಲಿನ ಆಯವ್ಯಯದಲ್ಲಿ

- ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯವನ್ನು ಒದಗಿಸಲು 400 ಕೋಟಿ ರೂ.ಗಳ ವೆಚ್ಚದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಲು ಕ್ರಿಯಾ ಯೋಜನೆ ಜಾರಿ
- ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕಗಳಿಸಿರುವ 2000 ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡಲಾಗಿದೆ.
- ಬಿ.ಎಡ್ ಮತ್ತು ಡಿ.ಎಡ್. ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ 25,000 ರೂ.ಗಳ ವಿಶೇಷ ಪ್ರೋತ್ಸಾಹಧನ ನೀಡಲು ಆದೇಶ.
- ವಿದ್ಯಾಸಿರಿ ಯೋಜನೆಯಡಿಯಲ್ಲಿ 2018-19ನೇ ಸಾಲಿನಿಂದ ಫಲಾನುಭವಿಗಳ ಸಂಖ್ಯೆಯನ್ನು 25,000ಕ್ಕೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗಿದೆ.
- ದಾರುಲ್-ಉಲೂಮ್ ಸಬೀಲುರ್ ರೆಹಮಾನ ರಿಷಾದ್, ಅರೆಬಿಕ್ ಕಾಲೇಜು, ಬೆಂಗಳೂರು ಆವರಣದಲ್ಲಿ ಐವಾನ್-ಎ-ಆಶ್ರಫ್ ಸ್ಮಾರಕ ಭವನ ನಿರ್ಮಾಣ ಮಾಡಲು ರೂ.10 ಕೋಟಿ ಒದಗಿಸಲಾಗುವುದು.
- ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯದಲ್ಲಿ (ಸೆಂಟ್ರಲ್ ಕಾಲೇಜು) ವೈವಿಧ್ಯತೆ ಮತ್ತು ಅಲ್ಪಸಂಖ್ಯಾತರ ಅಧ್ಯಯನ ಪೀಠ ಸ್ಥಾಪಿಸಲಾಗುವುದು.
- ವಿದ್ಯಾರ್ಥಿನಿಲಯ/ವಸತಿ ಶಾಲೆಗಳಲ್ಲಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಹಾಗೂ ಅತ್ಯುತ್ತಮ ಫಲಿತಾಂಶಗಳಿಸಿದ ವಸತಿ ಶಾಲೆ/ಕಾಲೇಜುಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು.
- 25 ಹೊಸ ಮೊರಾರ್ಜಿ ದೇಸಾಯಿ ವಸತಿ ಶಾಲೆ, 5 ಪದವಿ ಪೂರ್ವ ಮಹಿಳಾ ವಸತಿ ಕಾಲೇಜು, 2 ಮಾದರಿ ವಸತಿ ಶಾಲೆಗಳನ್ನು ಪ್ರಾರಂಭಿಸಲಾಗುವುದು. 25 ವಿದ್ಯಾರ್ಥಿನಿಲಯ, 10 ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯಗಳು, 4 ಬಿ.ಎಡ್ ಹಾಗೂ ಡಿ.ಎಡ್. ಆಂಗ್ಲ ಮಾಧ್ಯಮ ಬಾಲಕಿಯರ ವಸತಿಸಹಿತ ಕಾಲೇಜು ಮತ್ತು ಸಂಪನ್ಮೂಲ ಕೇಂದ್ರಗಳನ್ನು (Resource Centre) ಪ್ರಾರಂಭಿಸಲಾಗುವುದು.
- ಎಂ.ಎಸ್.ಡಿ.ಪಿ. ಯೋಜನೆಯಡಿಯಲ್ಲಿ ಸ್ವಂತ ಕಟ್ಟಡ ನಿರ್ಮಿಸಲಾಗಿರುವ 25 ಸ್ಥಳಗಳಲ್ಲಿ ವಿದ್ಯಾರ್ಥಿನಿಲಯ/ ಮಾದರಿ/ಆದರ್ಶ ಶಾಲೆ/ ವಸತಿ ಕಾಲೇಜುಗಳನ್ನು ಪ್ರಾರಂಭಿಸಲಾಗುವುದು.
- 25 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ತಲಾ 25 ದಾಖಲಾತಿ ಸಂಖ್ಯೆ ಹೆಚ್ಚಿಸಲಾಗಿದೆ. ಐದು ಬಾಲಕರ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳನ್ನು ಮೇಲ್ದರ್ಜೆಗೇರಿಸಲಾಗಿದೆ.
- 5 ಮೊರಾರ್ಜಿ ದೇಸಾಯಿ ಪದವಿ ಪೂರ್ವ